**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಬಸವನ-ಬಾಗೇವಾಡಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 2357/2022.**

**ಚಾ.ಸಾ-1**

**ಪ್ರಾ.ಸಾ - 1**

**ಸಾಕ್ಷಿಗೆ ದಿನಾಂಕ 06.08.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಃ ಸಿದ್ದಣ್ಣ ಮುಳಸಾವಳಗಿ |
| ತಂದೆಯ ಹೆಸರು | ಃ ಚಂದ್ರಶೇಖರ |
| ವಯಸ್ಸು | ಃ 32 ವರ್ಷ |
| ಉದ್ಯೋಗ | ಃ ಖಾಸಗಿ ಉದ್ಯೋಗ |
| ವಾಸಸ್ಥಳ | ಃ ಸುಂಗಠಾಣ, ತಾಃ ಸಿಂದಗಿ |

**ಮುಖ್ಯವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

**1.** ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ಇರುವುದಿಲ್ಲ. ಮೃತ ಸುವರ್ಣ ನನ್ನ ತಾಯಿ ಆಗಬೇಕು. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿದ್ದು ಅದು ದೂರಾಗಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ-1ಎ ಎಂದು ಗುರುತಿಸಲಾಯಿತು. ಅದರಲ್ಲಿ ಏನು ಬರೆಯಾಲಾಗಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಅನುಮತಿಸಲಾಯಿತು)**

**ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ**

**2.** ದಿಃ 06.11.2021 ರಂದು ನಾನು ಊರಿನಲ್ಲಿ ಇದ್ದಾಗ ಚಾಸಾ 11 ರವರಿಗೆ ದೂರವಾಣಿ ಕರೆ ಮಾಡಿ ನನ್ನ ತಾಯು ಯಳವಾರಿಗೆ ಬರುತ್ತಿರುವಾಗ ಆರೋಪಿಯ ಮೋಟರ ಸೈಕಲ ಮೇಲೆ ಬರುವಾಗ ಅಪಘಾತವಾಗಿರುತ್ತದೆ ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಂತರ ಅವರಿಗೆ

ಆಸ್ಪತ್ರೆಗೆ ದಾಖಲಿಸಿರುತ್ತಾರೆ ಎಂಬ ವಿಷಯ ಗೊತ್ತಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಅಪಘಾತದಲ್ಲಿ ಆರೋಪಿಯು ಅತೀ ವೇಗ ಮತ್ತು ಅಜಾಗರೂಗತೆಯಿಂದ ಚಲಾವಣೆ ಮಾಡಿಕೊಂಡು ಬಂದು ಜಂಪ್ ಪಡಿಸಿದ್ದರಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಅಪಘಾತವಾದಲ್ಲಿ ನನ್ನ ತಾಯಿಯ ತಲೆಗೆ ಪೆಟ್ಟಾಗಿ ಆಸ್ಪತ್ರೆಯಲ್ಲಿ ಉಪಚಾರ ಫಲಿಸದೆ ತೀರಿಕೊಂಡಿರುತ್ತಾರೆ ಎಂದರೆ ಸರಿ. ನ್ಯಾಯಾಲಯದ ಮುಂದೆ ಇರುವ ಆರೋಪಿಯಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ನಿಪಿ-1 ರಂತೆ ಪೊಲೀಸ ಠಾಣೆಗೆ ದೂರು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

3. ದಿಃ 11.11.2021 ರಂದು ನನ್ನ ತಾಯಿ ತೀರಿಕೊಂಡಿರುತ್ತಾರೆ ಎಂದು ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಮರುಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಅಲ್ಲಗಳೆದ ಮರುಹೇಳಿಕೆಯನ್ನು **ನಿಪಿ-2** ಎಂದು ಗುರುತಿಸಲಾಯಿತು.ದಿಃ 17.12.2021 ರಂದು ನ್ಯಾಯಾಲಯದ ಮುಂದೆ ಇರುವ ಆರೋಪಿಯ ಅಪಘಾತಪಡಿಸಿರುತ್ತಾನೆ ಎಂದು ಠಾಣೆಯಲ್ಲಿ ಗೊತ್ತಾಗಿರುತ್ತದೆ ಎಂದು ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಮರುಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಅಲ್ಲಗಳೆದ ಮರುಹೇಳಿಕೆಯನ್ನು **ನಿಪಿ-3** ಎಂದು ಗುರುತಿಸಲಾಯಿತು. ಎಲ್ಲಾ ವಿಷಯ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಏನೂ ಇಲ್ಲ ಅಂತಾ ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ. ಅಮೀತ್ ಘಟ್ಟಿ )**
**ದಿವಾಣಿ ನ್ಯಾಯಾಧೀಶರು ಮತ್ತು**
**ನ್ಯಾಯಿಕ ದಂಡಾಧಿಕಾರಿಗಳು**
**ಬಸವನ ಬಾಗೇವಾಡಿ.**